ಮನುಷ್ಯನು ಅವನ ಆಪ್ತ ಸ್ನೇಹಿತನ ಧರ್ಮದಲ್ಲಿರುತ್ತಾನೆ. ಆದ್ದರಿಂದ ನಿಮ್ಮಲ್ಲೊಬ್ಬನು ತಾನು ಯಾರೊಡನೆ ಸ್ನೇಹ ಬೆಳೆಸುತ್ತಿದ್ದೇನೆಂದು ನೋಡಿಕೊಳ್ಳಲಿ

ಅಬೂ ಹುರೈರ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ಮನುಷ್ಯನು ಅವನ ಆಪ್ತ ಸ್ನೇಹಿತನ ಧರ್ಮದಲ್ಲಿರುತ್ತಾನೆ. ಆದ್ದರಿಂದ ನಿಮ್ಮಲ್ಲೊಬ್ಬನು ತಾನು ಯಾರೊಡನೆ ಸ್ನೇಹ ಬೆಳೆಸುತ್ತಿದ್ದೇನೆಂದು ನೋಡಿಕೊಳ್ಳಲಿ." [حسن] [رواه أبو داود والترمذي وأحمد]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಮನುಷ್ಯನು ತನ್ನ ನಡವಳಿಕೆ ಮತ್ತು ವರ್ತನೆಗಳಲ್ಲಿ ತನ್ನ ಆಪ್ತ ಸ್ನೇಹಿತನನ್ನು ಮತ್ತು ಗೆಳೆಯನನ್ನು ಅನುಕರಿಸುತ್ತಾನೆ. ಗೆಳೆತನವು ನಡವಳಿಕೆ, ವರ್ತನೆ ಮತ್ತು ವ್ಯವಹಾರಗಳ ಮೇಲೆ ಪ್ರಭಾವ ಬೀರುತ್ತದೆ. ಆದ್ದರಿಂದಲೇ, ಉತ್ತಮ ಸ್ನೇಹಿತನನ್ನು ಆರಿಸಬೇಕೆಂದು ನಿರ್ದೇಶನ ನೀಡಲಾಗಿದೆ. ಏಕೆಂದರೆ, ಉತ್ತಮ ಸ್ನೇಹಿತನು ಅವನನ್ನು ಸತ್ಯವಿಶ್ವಾಸ, ಸನ್ಮಾರ್ಗ ಮತ್ತು ಒಳಿತಿಗೆ ಮುನ್ನಡೆಸುತ್ತಾನೆ ಮತ್ತು ಅವನಿಗೆ ಸಹಾಯ ಮಾಡುತ್ತಾನೆ.

http://www.sunnah.global/hadeeth/kn/show/3122